# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ರಾಜ್ಯ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ನೀಡುವ ಬಗ್ಗೆ.

**ಉಲ್ಲೇಖ:-** 1) ಶ್ರೀ ಕುಮಾರ್ ನಾಯಕ್ ಅಂದಿನ ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರ ನೇತೃತ್ವದ ಸಮಿತಿಯ ವರದಿ.

2) ಸರ್ಕಾರದ ಆದೇಶ ಸಂಖ್ಯೆ:ಇಡಿ 264 ಎಸ್‌ಎಲ್‌ಬಿ 2012 ದಿನಾಂಕ:09-05-2012.

* * *

**ಪ್ರಸ್ತಾವನೆ:-**

ರಾಜ್ಯದಲ್ಲಿನ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಶ್ರೀ ಕುಮಾರ್ ನಾಯಕ್ ಅಂದಿನ ಸರ್ಕಾರದ ಕಾರ್ಯದರ್ಶಿ, ಶಿಕ್ಷಣ ಇಲಾಖೆ ಇವರ ಸಮಿತಿಯ ವರದಿಯಲ್ಲಿನ ಶಿಫಾರಸ್ಸಿನ್ವಯ ವೇತನ ಪರಿಷ್ಕರಣೆ ಮತ್ತು ಇತರೆ ಆರ್ಥಿಕ ಸೌಲಭ್ಯಗಳನ್ನು ಅನುಷ್ಠಾನಗೊಳಿಸುವಂತೆ ಕೋರುತ್ತಿದ್ದಾರೆ. ಈ ವರದಿಯನ್ನು ಅಧಿಕಾರಿ ವೇತನ ಸಮಿತಿಯು 2011ರಲ್ಲಿ ಪರಿಗಣಿಸಿದ್ದು, ವರದಿಯಲ್ಲಿನ ಶಿಫಾರಸ್ಸುಗಳನ್ನು ಅಧಿಕಾರಿ ವೇತನ ಸಮಿತಿಯು ಒಪ್ಪಿಕೊಂಡಿರುವುದಿಲ್ಲ.

ಮೇಲ್ಕಂಡ ಶಿಫಾರಸ್ಸಿನನ್ವಯ ಮೇಲೆ(2)ರಲ್ಲಿ ಓದಲಾದ ಸರ್ಕಾರದ ಆದೇಶ ದಿನಾಂಕ:09-05-2012ರಲ್ಲಿ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ನೀಡಲಾಗುತ್ತಿರುವ ವಿಶೇಷ ವೇತನ ಭತ್ಯೆ ರೂ.200.00ಗಳನ್ನು ರೂ.400.00ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ರೂ.400.00ಗಳ ವಿಶೇಷ ವೇತನವನ್ನು ಮಂಜೂರು ಮಾಡಿದ್ದರೂ ಸಹ ಇತರ ಬೇಡಿಕೆಗಳನ್ನು ಪರಿಗಣಿಸುವಂತೆ ಸತತವಾಗಿ ಕೋರಿಕೆ ಸಲ್ಲಿಸುತ್ತಿದ್ದಾರೆ.

ಈ ಕುರಿತು ಸರ್ಕಾರದ ಮಟ್ಟದಲ್ಲಿ ವಿವಿಧ ಹಂತಗಳಲ್ಲಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಯಿತು. ಅಂತಿಮವಾಗಿ ದಿನಾಂಕ:13-04-2016ರಂದು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆಸಿದ ಉನ್ನತ ಮಟ್ಟದ ಸಭೆಯಲ್ಲಿ ಕೂಲಂಕಷವಾಗಿ ಚರ್ಚಿಸಿ, ಈ ಕೆಳಕಂಡಂತೆ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಯಿತು.

1. ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಮುಖ್ಯ ಶಿಕ್ಷಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲು;
2. ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಪ್ರಸ್ತುತ ನೀಡುತ್ತಿರುವ ರೂ.400/-ಗಳ ವಿಶೇಷ ಭತ್ಯೆಯನ್ನು ಮುಂದುವರೆಸುವುದು;

ದಿನಾಂಕ:01.08.2008ರಂದು ಅಥವಾ ನಂತರ ನೇಮಕಾತಿ ಹೊಂದಿದ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ರೂ.400/-ಗಳ ವಿಶೇಷ ಭತ್ಯೆಯ ಸೌಲಭ್ಯವನ್ನು ವಿಸ್ತರಿಸಲು ಕೋರಿರುವ ಬಗ್ಗೆ ಪ್ರಸಕ್ತ ಸಾಲಿನಲ್ಲಿ ಪರಿಶೀಲಿಸಲಾಗುವುದು.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳ ಸಂಘದ ಬೇಡಿಕೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 78 ಎಸ್‌ಎಲ್‌ಬಿ 2016,**
**ಬೆಂಗಳೂರು, ದಿನಾಂಕ: 15.04.2016**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳಿಗೆ ಮತ್ತು ಮುಖ್ಯ ಶಿಕ್ಷಕರುಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನು ವಿಸ್ತರಿಸಲು ಸರ್ಕಾರವು ಹರ್ಷಿಸುತ್ತದೆ.

1. ಜೂನ್ 2016ರಂದು ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲಾಗಿದೆ.
2. ದಿನಾಂಕ:01.08.2008ರ ಪೂರ್ವದಲ್ಲಿ ಸರ್ಕಾರಿ / ಅನುದಾನಿತ ಪ್ರೌಢಶಾಲೆಯಲ್ಲಿ ನೇಮಕಾತಿಗೊಂಡು ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರುಗಳಿಗೆ ನೀಡಲಾಗುತ್ತಿರುವ ರೂ.400/–ಗಳ ವಿಶೇಷ ಭತ್ಯೆಯನ್ನು ಮುಂದುವರೆಸಲಾಗಿದೆ.
3. ತಮ್ಮ ವೇತನ ಶ್ರೇಣಿ ಅಂತಿಮ ಹಂತವನ್ನು ತಲುಪಿರುವ ಮುಖ್ಯ ಶಿಕ್ಷಕರು ಹಾಗೂ ಪ್ರೌಢಶಾಲಾ ಶಿಕ್ಷಕರುಗಳು ಮೇಲಿನಂತೆ ಮಂಜೂರು ಮಾಡಿರುವ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಪಡೆಯಲು ಅರ್ಹರಾಗಿರುತ್ತಾರೆ.
4. ಮೇಲಿನ ಸೌಲಭ್ಯಗಳು ದಿನಾಂಕ:01.06.2016ರಿಂದ ಅಂದರೆ, 2016ರ ಜೂನ್ ತಿಂಗಳ ವೇತನದಿಂದ ಜಾರಿಗೆ ಬರುತ್ತದೆ.
5. ಆರ್ಥಿಕ ಹೊರೆಯನ್ನು ಒಳಗೊಂಡಿರದ ಸಂಘದ ಇತರ ಬೇಡಿಕೆಗಳನ್ನು ಶಿಕ್ಷಣ ಇಲಾಖೆಯು ಪರಿಶೀಲಿಸಲಿದೆ.
6. ಆರ್ಥಿಕ ಹೊರೆಯನ್ನು ಒಳಗೊಂಡಿರುವ ಸಂಘದ ಬೇಡಿಕೆಗಳನ್ನು ಮುಂದಿನ ವೇತನ ಸಮಿತಿ/ವೇತನ ಆಯೋಗದ ಮುಂದೆ ಮಂಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

15/4/16

(ಹೆಚ್.ಎಸ್. ಹೊನ್ನೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರೌಢಶಿಕ್ಷಣ).

**ಇವರಿಗೆ:–**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು– ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ

ಮತ್ತು ಪ್ರೌಢ ಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಸರಬರಾಜು ಮಾಡಲು.

**ಪ್ರತಿ:**

1) ಮಹಾಲೇಖಪಾಲರು(ಎ & ಇ), ಕರ್ನಾಟಕ, ಬೆಂಗಳೂರು-1.
2) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ), ವಿಧಾನ ಸೌಧ, ಬೆಂಗಳೂರು.
6) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು.
7) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
9) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
10) ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
11) ನಿರ್ದೇಶಕರು (ಪ್ರೌಢ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
12) ಎಲ್ಲಾ ಉಪನಿರ್ದೇಶಕರುಗಳಿಗೆ/ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ (ಆಯುಕ್ತರು/ಅಪರ ಆಯುಕ್ತರುಗಳ ಮುಖಾಂತರ)
13) ಕರ್ನಾಟಕ ರಾಜ್ಯ ಸರ್ಕಾರಿ / ಅನುದಾನಿತ ಪ್ರೌಢಶಾಲಾ ಶಿಕ್ಷಕರುಗಳ ಸಂಘ(ರಿ), ಬೆಂಗಳೂರು.
14) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.